## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ತಾಂತ್ರಿಕ ಸಲಹಾ ಸಮಿತಿಯ ಸದಸ್ಯರನ್ನು ಮುಂದುವರಿಸುವ ಬಗ್ಗೆ

ಓದಲಾಗಿದೆ:
1) ಸರ್ಕಾರಿ ಆದೇಶ ಸಂಖ್ಯೆ: ಸಂಕಇ 201 ಕೆಎಂಯು 2002 ದಿನಾಂಕ 22.05.2002
2) ಸರ್ಕಾರಿ ಆದೇಶ ಸಂಖ್ಯೆ: ಸಂಕಇ 201 ಕೆಎಂಯು 2002, ದಿನಾಂಕ 26.06.2002
3) ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 134 ಕೆಎಂಯು 2009, ದಿನಾಂಕ 14.10.2009
4) ಪತ್ರ ಸಂಖ್ಯೆ: ಆಪ್ರಾಸಂಪ/ಎ.ಸಿ.ಟಿ.6/20/2012-13, ದಿನಾಂಕ 26.05.2012

**ಪ್ರಸ್ತಾವನೆ:**

ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ವತಿಯಿಂದ ಕೈಗೊಳ್ಳಲಾಗುವ ಸಂರಕ್ಷಣಾ ಕಾಮಗರಿಗಳ ಅಂದಾಜು ಮೊತ್ತವು ರೂ.5.00 ಲಕ್ಷ ಮೀರಿದಲ್ಲಿ ಅಂತಹ ಕಾಮಗಾರಿಗಳ ಅಂದಾಜು ಪಟ್ಟಿಗಳಿಗೆ ಆಡಳಿತಾತ್ಮಕ ಮತ್ತು ತಾಂತ್ರಿಕ ಮಂಜೂರಾತಿ ನೀಡುವ ಬಗ್ಗೆ ಮೇಲೆ (1)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ತಾಂತ್ರಿಕ ಸಮಿತಿಯನ್ನು ನೇಮಿಸಲಾಗಿದೆ.

ಸದರಿ ಸಮಿತಿಗೆ ಮೂರು ಜನ ಅಧಿಕಾರೇತರ ತಾಂತ್ರಿಕ ಸದಸ್ಯರನ್ನು ಮೂರು ವರ್ಷದವಧಿಗೆ ಅಥವಾ ಮುಂದಿನ ಆದೇಶದವರೆಗೆ ಮೇಲೆ (2)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ನೇಮಿಸಲಾಗಿದೆ.

ಸದರಿ ಸಮಿತಿಯ ಕಾಲಾವಧಿಯನ್ನು ಕಾಲಕಾಲಕ್ಕೆ ಮುಂದುವರೆಸುತ್ತಾ ಬಂದಿದ್ದು, ಮೇಲೆ ಓದಲಾದ (3) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ದಿನಾಂಕ 07.02.2012 ರವರೆಗೆ ಮುಂದುವರೆಸಿ ಆದೇಶಿಸಿದೆ.

ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ತಾಂತ್ರಿಕ ಸಲಹಾ ಸಮಿತಿಯ ಅಧಿಕಾರೇತರ ಸದಸ್ಯರ ಅವಧಿಯು 07.02.2012ಕ್ಕೆ ಮುಕ್ತಾಯಗೊಂಡಿರುತ್ತದೆ. ಇಲಾಖೆಯ ಸಂರಕ್ಷಣಾ ಕಾಮಗಾರಿಗಳ ಅಂದಾಜುಪಟ್ಟಿ ಪರಿಶೀಲಿಸಿ ಸಲಹೆ ಮತ್ತು ಮಾರ್ಗದರ್ಶನಗಳನ್ನು ನೀಡಿ ಅಂದಾಜು ಪಟ್ಟಿಗೆ ತಾಂತ್ರಿಕ ಮಂಜೂರಾತಿ ನೀಡುವಲ್ಲಿ ಮತ್ತು ಕಾಮಗಾರಿಗಳನ್ನು ಅನುಷ್ಠಾನಗೊಳಿಸುವ ವಿವಿಧ ಹಂತಗಳಲ್ಲಿ ತಾಂತ್ರಿಕ ಸಲಹಾ ಸಮಿತಿ ಸದಸ್ಯರ ಸಲಹೆ ಮತ್ತು ಮಾರ್ಗದರ್ಶನವು ಇಲಾಖೆಗೆ ಅವಶ್ಯಕತೆಯಿರುವುದರಿಂದ ಈ ಕೆಳಕಂಡ ಮೂವರು ಸಮಿತಿ ಸದಸ್ಯರನ್ನು ದಿನಾಂಕ 08.02.2012 ರಿಂದ 07.02.2015 ರವರೆಗೆ ಒಟ್ಟು ಮೂರು ವರ್ಷಗಳ ಅವಧಿಗೆ ಮುಂದುವರೆಸಿ ಸರ್ಕಾರಿ ಆದೇಶ ಹೊರಡಿಸಬೇಕೆಂದು ಮೇಲೆ (3) ರಲ್ಲಿ ಓದಲಾದ ಪತ್ರದಲ್ಲಿ ಆಯುಕ್ತರು, ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ರವರು ಕೋರಿರುತ್ತಾರೆ:-

1. ಶ್ರೀ ಜಿ.ಅಶ್ವತ್ಥ ನಾರಾಯಣ, ನಿವೃತ್ತ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ
2. ಶ್ರೀ ಎಂ. ರಾಯಚೂರು, ನಿವೃತ್ತ ಮುಖ್ಯ ಇಂಜಿನಿಯರ್, ಲೋಕೋಪಯೋಗಿ ಇಲಾಖೆ
3. ಶ್ರೀ ಸಿ.ಬಿ.ಪಾಟೀಲ್, ನಿವೃತ್ತ ಉಪ ಅಧೀಕ್ಷಕ ಪುರಾತತ್ವಜ್ಞರು, ಭಾರತೀಯ ಪುರಾತತ್ವ ಸರ್ವೇಕ್ಷಣ

ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ:-

**ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 147 ಕೆಎಂಯು 2012**
**ಬೆಂಗಳೂರು, ದಿನಾಂಕ: 31.08.2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಈ ಕೆಳಕಂಡ ತಾಂತ್ರಿಕ ಸಲಹಾ ಸಮಿತಿಯ ಅಧಿಕಾರೇತರ ಸದಸ್ಯರ ಅವಧಿಯನ್ನು ದಿನಾಂಕ 08.02.2012 ರಿಂದ 31.03.2013 ರವರೆಗೆ ಅಥವಾ ಮುಂದಿನ ಆದೇಶದವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮುಂದುವರೆಸಿ ಆದೇಶಿಸಿದೆ:-

1. ಶ್ರೀ ಜಿ.ಅಶ್ವತ್ಥ ನಾರಾಯಣ, ನಿವೃತ್ತ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ
2. ಶ್ರೀ ಎಂ. ರಾಯಚೂರು, ನಿವೃತ್ತ ಮುಖ್ಯ ಇಂಜಿನಿಯರ್, ಲೋಕೋಪಯೋಗಿ ಇಲಾಖೆ
3. ಶ್ರೀ ಸಿ.ಬಿ.ಪಾಟೀಲ್, ನಿವೃತ್ತ ಉಪ ಅಧೀಕ್ಷಕ ಪುರಾತತ್ವಜ್ಞರು, ಭಾರತೀಯ ಪುರಾತತ್ವ ಸರ್ವೇಕ್ಷಣ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಿ.ಬಿ.ಹೇಮಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ
(ಆಡಳಿತ ಕನ್ನಡ)

ಇವರಿಗೆ:

ಸಂಕಲನಾಧಿಕಾರಿ, ಕರ್ನಾಟಕ ರಾಜ್ಯಪತ್ರ, ಕೆಂಗೇರಿ ಹೊರವಲಯ ಮುದ್ರಣಾಲಯ, ಬೆಂಗಳೂರು

ಪ್ರತಿಯನ್ನು:

1. ಮಹಾಲೇಖಪಾಲರು (ಎ&ಇ) ಕರ್ನಾಟಕ, ಬೆಂಗಳೂರು
2. ಆಯುಕ್ತರು, ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಪ್ರಾಚ್ಯವಸ್ತು ಸುವರ್ಣ ಕರ್ನಾಟಕ ಭವನ, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರ ಆವರಣ, ದೊಡ್ಡಕೆರೆ ಮೈದಾನ, ಮೈಸೂರು-103
3. ನಿರ್ದೇಶಕರು (ವಸ್ತು ಸಂಗ್ರಹಾಲಯಗಳು) ಪ್ರಾಚ್ಯವಸ್ತು ಸಂಗ್ರಹಾಲಯಗಳ ಮತ್ತು ಪರಂಪರೆ ಇಲಾಖೆ, ವೆಂಕಟಪ್ಪ ಚಿತ್ರ ಶಾಲೆ,ಕಸ್ತೂರ ಬಾ ರಸ್ತೆ, ಬೆಂಗಳೂರು.
4. ನಿರ್ದೇಶಕರು (ಪ್ರಾಚ್ಯವಸ್ತು) ಪ್ರಾಚ್ಯವಸ್ತು, ಸಂಗ್ರಹಾಲಯಗಳ ಮತ್ತು ಪರಂಪರೆ ಇಲಾಖೆ, ಕರ್ನಾಟಕ ವಸ್ತು ಪ್ರದರ್ಶನ ಆವರಣ, ದೊಡ್ಡಕೆರೆ ಮೈದಾನ, ಮೈಸೂರು-10
5. ಸಂಬಂಧಿಸಿದ ಸದಸ್ಯರುಗಳಿಗೆ (ಆಯುಕ್ತರು, ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಇವರ ಮುಖಾಂತರ)
6. ಮಾನ್ಯ ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
7. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ, ವಿಕಾಸಸೌಧ, ಬೆಂಗಳೂರು
8. ಸರ್ಕಾರದ ಉಪಕಾರ್ಯದರ್ಶಿಗಳು, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು
9. ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.